ಕರ್ನಾಟಕ ಸರ್ಕಾರ
Government of karnataka
ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ
DEPARTMENT OF STATE EDUCATIONAL RESEARCH AND TRAINING
No 4, 100 FT RING ROAD, BANASHANKARI 3 RD STAGE BENGALURU - 560 085
Email: ntse.dsert-ka@nic.in Website: http://dsert.kar.nic.in
ಡಿಎಸ್ಇಆರ್‌ಟಿ DSERT
Phone - 080 26980100
Fax - 080 26422377

ಸಂಖ್ಯೆ: DSERT/NTSE/NMMS- NSP/2024-25 ದಿನಾಂಕ: 08-07-2024

# ಸುತ್ತೋಲೆ

ವಿಷಯ : 2024-25 ನೇ ಶೈಕ್ಷಣಿಕ ಸಾಲಿಗೆ NMMS ವಿದ್ಯಾರ್ಥಿ ವೇತನಕ್ಕಾಗಿ, ಅರ್ಹ ಫಲಾನುಭವಿಗಳು ಅರ್ಜಿ ಸಲ್ಲಿಸಲು ನ್ಯಾಷನಲ್ ಸ್ಕಾಲರ್‌ಶಿಪ್ ಪೋರ್ಟಲ್ (NSP) ತೆರೆದಿರುವ ಕುರಿತು.

ಉಲ್ಲೇಖ : Under Secretary, Department of School Education & Literacy, Ministry of Education, Govemment of India ರವರ ಪತ್ರ ಸಂಖ್ಯೆ: F. No. I7-II2023- SS. ದಿನಾಂಕ: 24-6-2024 ಹಾಗೂ 03-07-2024.

********

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, 2024-25ನೇ ಸಾಲಿನಲ್ಲಿ NMMS ವಿದ್ಯಾರ್ಥಿ ವೇತನಕ್ಕಾಗಿ National Scholarship Portal ನಲ್ಲಿ ಅರ್ಹ ಫಲಾನುಭವಿಗಳು ಅರ್ಜಿ ಸಲ್ಲಿಸಲು ಈ ಕೆಳಗಿನಂತೆ ವೇಳಾಪಟ್ಟಿ ನಿಗಧಿ ಪಡಿಸಿರುವುದಾಗಿ ಮೇಲಿನ ಉಲ್ಲೇಖಿತ ಪತ್ರದಲ್ಲಿ ತಿಳಿಸಿರುತ್ತಾರೆ.

| **ಕಾರ್ಯ ಚಟುವಟಿಕೆಯ ವಿವರ** | **ಅವಧಿ** |
|---|---|
| ಪೋರ್ಟಲ್ ಆರಂಭ | 30 -6-2024 |
| ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು/ನವೀಕರಿಸಲು ಅಂತಿಮ ದಿನಾಂಕ | 31-8-2024 |
| ಶಾಲಾ/ ಕಾಲೇಜು ಹಂತದಲ್ಲಿ INO ಗಳಿಂದ ಅರ್ಜಿ ಪರಿಶೀಲನೆಗೆ ಅಂತಿಮ ದಿನಾಂಕ | 15 -9-2024 |
| ಜಿಲ್ಲಾ ಹಂತದಲ್ಲಿ DNO ಗಳಿಂದ ಅರ್ಜಿ ಪರಿಶೀಲನೆಗೆ ಅಂತಿಮ ದಿನಾಂಕ | 30-9- 2024 |

**ಪ್ರಸಕ್ತ ಸಾಲಿನಲ್ಲಿ National Scholarship Portal ನಲ್ಲಿ ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಸಲ್ಲಿಸಲು, ಅನುಸರಿಸಬೇಕಾದ ಪ್ರಮುಖ ಅಂಶಗಳು :**

- 2024-25ನೇ ಸಾಲಿನಲ್ಲಿ Fresh ಹಾಗೂ Renewal ವಿದ್ಯಾರ್ಥಿಗಳು (NSP) ಯಲ್ಲಿ ಅರ್ಜಿಗಳನ್ನು ಸಲ್ಲಿಸಲು **One Time Registration(OTR)** ಮಾಡಿಕೊಳ್ಳುವುದು ಕಡ್ಡಾಯವಾಗಿರುತ್ತದೆ.

***(OTR) is a unique 14-digit number issued based on the Aadhaar/Aadhaar Enrolment ID (EID)**

- One Time Registration (OTR) ಪ್ರತಿ ವಿದ್ಯಾರ್ಥಿಗೂ ನೀಡಲಾಗುವ ಒಂದು ಅನನ್ಯ (unique) ಸಂಖ್ಯೆಯಾಗಿದ್ದು, ಇದು ವಿದ್ಯಾರ್ಥಿಯ ನ್ಯಾಷನಲ್ ಸ್ಕಾಲರ್‌ಶಿಪ್ ಪೋರ್ಟಲ್ (NSP)ನಲ್ಲಿ ಅರ್ಜಿ ಸಲ್ಲಿಸಲು ಅನ್ವಯವಾಗುತ್ತದೆ.
- NMMS ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾಗಿರುವ Renewal ವಿದ್ಯಾರ್ಥಿಗಳಿಗೆ NSP ನಲ್ಲಿ ನೊಂದಾಯಿತ ಮೋಬೈಲ್ ಗೆ SMS ಮೂಲಕ Reference / OTR ಸಂಖ್ಯೆ ಕಳುಹಿಸಲಾಗುತ್ತಿದೆ.
- Fresh ವಿದ್ಯಾರ್ಥಿಗಳಿಗೆ SMS ಮೂಲಕ Reference ID ಅಥವಾ OTR ಸಂಖ್ಯೆಯನ್ನು ಕಳುಹಿಸಲಾಗುವುದಿಲ್ಲ. ಆದ್ದರಿಂದ NSP ನಲ್ಲಿ ಮೊದಲ ಸಲ ಅರ್ಜಿ ಸಲ್ಲಿಸುತ್ತಿರುವ (Fresh) ವಿದ್ಯಾರ್ಥಿಗಳು National Scholarship Portal ನಲ್ಲಿ Student Login ನಲ್ಲಿ ಲಭ್ಯವಿರುವ "**Know your OTR**" ಎಂಬ ಆಯ್ಕೆಯನ್ನು ಬಳಸಿ OTR ಅಥವಾ ರೆಫೆರನ್ಸ್ ಸಂಖ್ಯೆಯನ್ನು ಪಡೆದುಕೊಳ್ಳಬೇಕಾಗುತ್ತದೆ.
- 2024-25 ನೇ ಸಾಲಿನಲ್ಲಿ NSP ನಲ್ಲಿ ಅರ್ಜಿ ಸಲ್ಲಿಸಲು Face Authentication ಕಡ್ಡಾಯವಾಗಿದ್ದು, ಆಧಾರ್ ನಲ್ಲಿರುವ ಮಾಹಿತಿಗಳನ್ನು ಸರಿಪಡಿಸುವುದರೊಂದಿಗೆ ಇತ್ತೀಚಿನ ಭಾವಚಿತ್ರವನ್ನು ಕಡ್ಡಾಯವಾಗಿ update ಮಾಡಿಸುವುದು. ( ಆಧಾರ್ ನಲ್ಲಿ ಅತಿ ಚಿಕ್ಕ ವಯಸ್ಸಿನ ಫೋಟೋಗಳಿರುವುದರಿಂದ Face authentication Error ಎಂದು ಕಾಣಿಸಿಕೊಳ್ಳುತ್ತದೆ)

**ಅ) ಆಧಾರ್ ಸಂಖ್ಯೆ ಇರುವ ವಿದ್ಯಾರ್ಥಿಗಳು OTR ಪಡೆಯಲು ಅಗತ್ಯ ದಾಖಲೆಗಳು**

- ಸಕ್ರಿಯ ಮೊಬೈಲ್ ಸಂಖ್ಯೆ.
- ಆಧಾರ್ ಸಂಖ್ಯೆಗೆ ಜೋಡಣೆಯಾಗಿರುವ ಮೊಬೈಲ್ ಸಂಖ್ಯೆ.
- ವಿದ್ಯಾರ್ಥಿಯ ಆಧಾರ್ ಸಂಖ್ಯೆ.

**ಆ) ಆಧಾರ್ ಸಂಖ್ಯೆ ಇಲ್ಲದೇ ಇರುವ ವಿದ್ಯಾರ್ಥಿಗಳು OTR ಪಡೆಯಲು ಅಗತ್ಯವಿರುವ ದಾಖಲೆಗಳು**

- ಸಕ್ರಿಯ ಮೊಬೈಲ್ ಸಂಖ್ಯೆ
- ಪೋಷಕರ ಆಧಾರ್ ಸಂಖ್ಯೆಗೆ ಜೋಡಣೆಯಾಗಿರುವ ಮೊಬೈಲ್ ಸಂಖ್ಯೆ
- ವಿದ್ಯಾರ್ಥಿಯು ಆಧಾರ್ ಸಂಖ್ಯೆಗಾಗಿ ಸಲ್ಲಿಸಿದ ಅರ್ಜಿಯ EID ಸಂಖ್ಯೆ.
- ಪೋಷಕರ ಆಧಾರ್ ಸಂಖ್ಯೆ.

**ವಿ ಸೂ :** ಪೋಷಕರ ಆಧಾರ್ ಸಂಖ್ಯೆ ನೀಡಿದ್ದರೂ, ಕೂಡ ಉಳಿದ ಎಲ್ಲಾ ಮಾಹಿತಿಗಳು ಹಾಗೂ ಭಾವಚಿತ್ರ ವಿದ್ಯಾರ್ಥಿಯದ್ದೇ ಆಗಿರಬೇಕು. ವಿದ್ಯಾರ್ಥಿ ವೇತನವನ್ನು ಪಡೆಯಲು, ಕಾಲ ಮಿತಿಯೊಳಗೆ ವಿದ್ಯಾರ್ಥಿಯು ತನ್ನ ಆಧಾರ್ ಸಂಖ್ಯೆಯನ್ನು update ಮಾಡತಕ್ಕದ್ದು.

**ಇ) OTR(One Time Registration) ಸಂಖ್ಯೆ ಪಡೆದಿರುವ ವಿದ್ಯಾರ್ಥಿಗಳಿಗೆ ಸೂಚನೆಗಳು.**

- 2023-24ನೇ ಸಾಲಿನಲ್ಲಿ face authentication ಮಾಡಿದ ವಿದ್ಯಾರ್ಥಿಗಳಿಗೆ NSPಯ ಮೂಲಕ ಜೆನರೇಟ್ ಆದ One Time Registration(OTR) ಸಂಖ್ಯೆಯನ್ನು, ಅರ್ಜಿದಾರರ ನೊಂದಾಯಿತ ಮೊಬೈಲ್ ಸಂಖ್ಯೆಗೆ SMS ಮೂಲಕ ಕಳುಹಿಸಿಕೊಡಲಾಗಿದೆ.
- ಈಗಾಗಲೇ OTR ಸಂಖ್ಯೆಯನ್ನು ಪಡೆದಿರುವ ವಿದ್ಯಾರ್ಥಿಗಳು ವಿದ್ಯಾರ್ಥಿವೇತನಕ್ಕಾಗಿ ನೇರವಾಗಿ NSP ಪೋರ್ಟಲ್ ನಲ್ಲಿ ಅರ್ಜಿ ಸಲ್ಲಿಸಬೇಕು

**ಈ) . ರೆಫರೆನ್ಸ ಸಂಖ್ಯೆ ಪಡೆದಿರುವ ವಿದ್ಯಾರ್ಥಿಗಳು OTR ಪಡೆಯಲು ಅನುಸರಿಸಬೇಕಾದ ಕ್ರಮಗಳು (** ರೆಫರನ್ಸ್ ಸಂಖ್ಯೆ ಉದಾ: R23-003101555**)**

- 2023-24ನೇ ಸಾಲಿನಲ್ಲಿ OTP based eKYC ಯನ್ನು ಪೂರ್ಣಗೊಳಿಸಿದ್ದರೂ ಕೂಡ, face authentication ಅನ್ನು ಪೂರ್ಣಗೊಳಿಸದೇ ಇರುವ ವಿದ್ಯಾರ್ಥಿಗಳಿಗೆ MoE ಯಿಂದ ನೋಂದಾಯಿತ ಮೊಬೈಲ್ ಗೆ ರೆಫರೆನ್ಸ ಸಂಖ್ಯೆಯನ್ನು ಕಳುಹಿಸಲಾಗಿರುತ್ತದೆ.
- ರೆಫೆರೆನ್ಸ್ ಸಂಖ್ಯೆಯನ್ನು ಬಳಸಿಕೊಂಡು, ವಿದ್ಯಾರ್ಥಿಗಳು Face Authentication ಪೂರ್ಣಗೊಳಿಸುವ ಮೂಲಕ OTR ಸಂಖ್ಯೆಯನ್ನು ಪಡೆದುಕೊಳ್ಳುವುದು.
- ಅದಕ್ಕಾಗಿ **ಆಂಡ್ರಾಯ್ಡ್ ಮೊಬೈಲ್‌ನ google play store ನಿಂದ** ಈ ಮುಂದೆ ಸೂಚಿಸಿರುವ **ಎರಡೂ App ಗಳನ್ನು install** ಮಾಡಿಕೊಳ್ಳುವುದು

i) **AadhaarFaceRD** App ನ್ನುinstall ಮಾಡಿಕೊಳ್ಳುವುದು.
(Link: https://play.google.com/store/apps/details?id=in.gov.uidai.facerd

ii) **NSP OTR App** ಅನ್ನು install ಮಾಡುವುದು.
(link: https://play.google.com/store/apps/details?id=in.gov.scholarships.nspotr&pli=1)

**ಉ) App ಗಳ ಮೂಲಕ OTR ಪಡೆಯುವ ಪ್ರಕ್ರಿಯೆ**

- Mobile ನಲ್ಲಿ **NSP OTR App** ಅನ್ನು ತೆರೆದಾಗ ಕಾಣಿಸಿಕೊಳ್ಳುವ ಸ್ಕ್ರೀನ್ ನಲ್ಲಿ ಕೆಂಪು ಬಣ್ಣದಲ್ಲಿ ಗುರುತು ಮಾಡಿರುವ "eKYC with FaceAuth" ಎಂಬ ಆಯ್ಕೆ ಮೇಲೆ ಕ್ಲಿಕ್ ಮಾಡಿ
- ಈ screen ನಲ್ಲಿ ವಿದ್ಯಾರ್ಥಿಯು ಪಡೆದಿರುವ **Reference ID** ನಮೂದಿಸುವುದು.

- ನಂತರ ಮೊಬೈಲ್ ಗೆ ಬಂದಿರುವ **OTP** ಹಾಗೂ ಸ್ಕ್ರೀನ್‌ನಲ್ಲಿ ಸೂಚಿಸಿರುವ **CAPTCHA** ಸರಿಯಾಗಿ ನಮೂದಿಸಿ **Next** ಎಂಬುದರ ಮೇಲೆ ಕ್ಲಿಕ್ ಮಾಡಿ.
- ವಿದ್ಯಾರ್ಥಿಯ ಆಧಾರನಲ್ಲಿರುವಂತೆ ಮಾಹಿತಿಗಳು ಸ್ಕ್ರೀನ್ ಮೇಲೆ ಕಾಣಿಸಿಕೊಳ್ಳುತ್ತವೆ.
- ಮಾಹಿತಿಯನ್ನು ಖಚಿತಪಡಿಸಿಕೊಂಡು **Proceed For Face Authentication** ಮೇಲೆ ಕ್ಲಿಕ್ ಮಾಡಿ.
- ಸ್ಕ್ರೀನ್ ಮೇಲೆ ಕಾಣಿಸಿಕೊಳ್ಳುವ ಸೂಚನೆಗಳನ್ನು ಓದಿಕೊಂಡು **I Agree** ಎಂಬ ಆಯ್ಕೆಯ ಮೇಲೆ ಕ್ಲಿಕ್ ಮಾಡಿ.
- ಈಗ ವಿದ್ಯಾರ್ಥಿಯು **Face authentication** ಮಾಡಲು ಹೊಸ screen ಕಾಣಿಸಿಕೊಳ್ಳುತ್ತದೆ.
- Screen ಮೇಲಿರುವ ಸೂಚನೆಗಳನ್ನು ಓದಿಕೊಂಡು **check box ನಲ್ಲಿ** " Tick Mark" ಗುರ್ತಿಸಿ **Proceed** ಆಯ್ಕೆ ಮೇಲೆ ಕ್ಲಿಕ್ ಮಾಡಿ.
- ನಂತರ Face authentication screen ಕಾಣಿಸಿಕೊಳ್ಳುತ್ತದೆ.
- Screen ಮೇಲೆ ಕಾಣಿಸಿಕೊಳ್ಳುವ ವೃತ್ತಾಕಾರದೊಳಗೆ ವಿದ್ಯಾರ್ಥಿಯ ಮುಖ ಸ್ಪಷ್ಟವಾಗಿ ಗೋಚರಿಸುವಂತೆ ಇರಬೇಕು.
- ನಂತರ **Pls Blink to capture** ಎಂಬ ಸೂಚನೆ ಕಾಣಿಸಿದಾಗ ವಿದ್ಯಾರ್ಥಿಯು ಕಣ್ಣು ರೆಪ್ಪೆ ಮುಚ್ಚಿ ತೆರೆದಾಗ Face Capture ಆಗುತ್ತದೆ. ( Error ಬಂದಲ್ಲಿ ಮತ್ತೆ ಪ್ರಯತ್ನಿಸಿ)
- **Face authentication successfully completed** ಎಂಬ ಮಾಹಿತಿಯೊಂದಿಗೆ **OTR ಸಂಖ್ಯೆ** ಜನರೇಟ್ ಆಗುತ್ತದೆ.
- ಜನರೇಟ್ ಆದ **OTR** ಸಂಖ್ಯೆ ಹಾಗೂ **Password** ನೋಂದಾಯಿತ ಮೊಬೈಲ್ ಗೆ **SMS** ಬರುತ್ತದೆ.
- ಈಗ login ಆಯ್ಕೆಯ ಮೇಲೆ ಕ್ಲಿಕ್ ಮಾಡಿ, ಕಾಣಿಸಿಕೊಳ್ಳುವ ಸ್ಕ್ರೀನ್ ನಲ್ಲಿ **OTR** ಸಂಖ್ಯೆ ಹಾಗೂ **Password** ಹಾಗೂ **CAPTCHA** ಸರಿಯಾಗಿ ನಮೂದಿಸಿ login ಆಗಿ ಹೊಸ password ಸೃಜಿಸಿಕೊಳ್ಳುವುದು. (ಕನಿಷ್ಟ ಒಂದು Upper case, Lower case, special character, numerical character ಒಳಗೊಂಡಂತೆ ಕನಿಷ್ಠ 8 character ಇರಬೇಕು)
- ಕೆಳಗಿರುವ **CAPTCHA** ನಮೂದಿಸಿ **Next** ಎಂಬುದರ ಮೇಲೆ ಕ್ಲಿಕ್ ಮಾಡಿದಾಗ, **Password successfully updated** ಎಂಬ ಮಾಹಿತಿ ಲಭ್ಯವಾಗುತ್ತದೆ.
- ಈ ರೀತಿ ಪಡೆದ **OTR** ಹಾಗೂ **password** ಬಳಸಿ National Scholarship Portal ನಲ್ಲಿ ಅರ್ಜಿ ಸಲ್ಲಿಸಲು ಕ್ರಮವಹಿಸುವುದು.

**ಊ) Reference ID ಪಡೆಯದೇ ಇರುವ Fresh ವಿದ್ಯಾರ್ಥಿಗಳು ವಹಿಸಬೇಕಾದ ಕ್ರಮಗಳು**

- ವಿದ್ಯಾರ್ಥಿಗಳು NSP ನಲ್ಲಿ Login ಆಗುವುದು.
- **Apply for One Time Registration** ಮೇಲೆ ಕ್ಲಿಕ್ ಮಾಡುವುದು.
- ಕಾಣಿಸಿಕೊಳ್ಳುವ ಸ್ಕ್ರೀನ್ ನಲ್ಲಿ **Register** ಮೇಲೆ ಕ್ಲಿಕ್ ಮಾಡುವುದು.

- ಸೂಚನೆಗಳನ್ನು ಓದಿಕೊಂಡು check box ನಲ್ಲಿ" TICK MARK" ಗುರ್ತಿಸಿ **Next** ಮೇಲೆ ಕ್ಲಿಕ್ ಮಾಡುವುದು.
- ಕಾಣಿಸಿಕೊಳ್ಳುವ ಸ್ಕ್ರೀನ್ ನಲ್ಲಿ **ಮೊಬೈಲ್ ಸಂಖ್ಯೆ** ನಮೂದಿಸಿ **OTP** ಪಡೆಯುವುದು.
- ಪಡೆದ **OTP** ಹಾಗೂ **CAPTCHA** ಅನ್ನು ನಮೂದಿಸಿ **Verify** ಆಯ್ಕೆಯ ಮೇಲೆ ಕ್ಲಿಕ್ ಮಾಡುವುದು.
- ಕಾಣಿಸಿಕೊಳ್ಳುವ ಸ್ಕ್ರೀನ್ ನಲ್ಲಿ ಆಧಾರ್ ಸಂಖ್ಯೆ ಹಾಗೂ **CAPCTHA** ಅನ್ನು ನಮೂದಿಸಿ **Submit** ಮೇಲೆ ಕ್ಲಿಕ್ ಮಾಡುವುದು.
- ಈಗ **Reference ID** ಜನರೇಟ್ ಆಗುತ್ತದೆ.
- ಮೇಲೆ ಕಂಡಿಕೆ **ಈ** ಹಾಗೂ **ಉ** ನಲ್ಲಿ ತಿಳಿಸಿರುವ ಕ್ರಮಗಳನ್ನು ಅನುಸರಿಸಿ ನಂತರ National Scholarship Portal ನಲ್ಲಿ ಅರ್ಜಿ ಸಲ್ಲಿಸಲು ಕ್ರಮವಹಿಸುವುದು.

## ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಕೆ ಹಾಗೂ ಪರಿಶೀಲನಾ ಹಂತಗಳು

| SL No | Scholarship scheme claimed class | Application Process |
|---|---|---|
| 1 | IX & X ( Pre matric ) | Student ⟹ Head Master(INO) ⟹ District (DIET-DNO) ⟹ MoE |
| 2 | XI & XII (Post matric) | Student ⟹ PU Principal (INO) ⟹ District(DIET-DNO) ⟹ MoE |

## ವಿವಿಧ ಹಂತದ ಅಧಿಕಾರಿಗಳು ಕೈಗೊಳ್ಳಬೇಕಾದ ಕಾರ್ಯಗಳು

**ಜಿಲ್ಲಾ (ಡಯಟ್) ಹಂತ:**

- ಡಯಟ್ ಪ್ರಾಂಶುಪಾಲರು ತಮ್ಮ ವ್ಯಾಪ್ತಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳ ಸಭೆ ಕರೆದು NSP OTR ಹಾಗೂ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಬಗ್ಗೆ ಮಾಹಿತಿ ನೀಡುವುದು.
- ಸ್ಥಳೀಯ ಪತ್ರಿಕೆಗಳಲ್ಲಿ NMMS ವಿದ್ಯಾರ್ಥಿ ವೇತನಕ್ಕೆ ಸಂಬಂಧಿಸಿದಂತೆ ಪ್ರಕಟಣೆ ಮಾಡುವುದು.
- ಸ್ಥಳೀಯ ಕೇಬಲ್ ನೆಟ್‌ವರ್ಕ ಮುಖಾಂತರ NMMS ವಿದ್ಯಾರ್ಥಿ ವೇತನದ ಬಗ್ಗೆ ಪ್ರಚಾರ ಮಾಡುವುದು.
- ತಮ್ಮ ವ್ಯಾಪ್ತಿಯಲ್ಲಿ ಬರುವ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಪ್ರಕ್ರಿಯೆ ಬಗ್ಗೆ ಮಾಹಿತಿ ನೀಡುವುದು.
- ಶಾಲಾ ಹಾಗೂ ಪದವಿ ಪೂರ್ವ ಕಾಲೇಜುಗಳಿಂದ NSPನಲ್ಲಿ Submit ಆಗಿರುವ ಅರ್ಜಿಗಳನ್ನು ಜಿಲ್ಲಾ ಹಂತದಲ್ಲಿ NMMS ಮಾರ್ಗಸೂಚಿ ಅನುಸಾರವಾಗಿ Verify ಮಾಡುವುದು.

- ಪ್ರತಿ 15 ದಿನಗಳಿಗೊಮ್ಮೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಸಭೆ ಕರೆದು NMMS ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಕೆ ಬಗ್ಗೆ ಪ್ರಗತಿ ಪರಿಶೀಲನೆ ಮಾಡುವುದು.
- ಜಿಲ್ಲೆಯ ಎಲ್ಲಾ ಅರ್ಹ ವಿದ್ಯಾರ್ಥಿಗಳು, ನಿಗಧಿತ ಅವಧಿಯೊಳಗಡೆ ಅರ್ಜಿ ಸಲ್ಲಿಸಿರುವ ಬಗ್ಗೆ ಖಾತ್ರಿಪಡಿಸಿಕೊಳ್ಳುವುದು.

**ತಾಲ್ಲೂಕು ಹಂತ** :

- ಕ್ಷೇತ್ರ ಶಿಕ್ಷಣಾಧಿಕಾರಿಗಳು ಶಾಲಾ ಮುಖ್ಯೋಪಾಧ್ಯಯರ ಸಭೆ ಕರೆದು NSP OTR ಹಾಗೂ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಹಾಗೂ ಅರ್ಜಿಗಳನ್ನು INO Login ನಲ್ಲಿ Verify ಮಾಡುವ ಕ್ರಮದ ಬಗ್ಗೆ ತಿಳಿಸುವುದು.
- ಸ್ಥಳೀಯ ಸುದ್ದಿ ಮಾಧ್ಯಮಗಳನ್ನು ಬಳಸಿಕೊಂಡು NMMS ವಿದ್ಯಾರ್ಥಿ ವೇತನದ ಬಗ್ಗೆ ಪ್ರಚಾರ ಮಾಡುವುದು.
- NMMS ವಿದ್ಯಾರ್ಥಿ ವೇತನದ ಬಗ್ಗೆ ಬ್ಯಾನರ್ / ಪಾಂಪ್ಲೆಟ್ ಗಳನ್ನು ಬಳಸಿ ಪ್ರಚಾರ ಮಾಡುವುದು.
- ತಮ್ಮ ಕಛೇರಿಯ NOTICE BOARD ನಲ್ಲಿ ಈ ಕುರಿತು ಪ್ರಕಟಿಸಲು ಕ್ರಮ ವಹಿಸುವುದು.
- ಪ್ರತಿ 15 ದಿನಗಳಿಗೊಮ್ಮೆ ಶಾಲಾ ಮುಖ್ಯಸ್ಥರು/ಪ್ರಾಂಶುಪಾಲರುಗಳ ಸಭೆ ಕರೆದು NMMS ವಿದ್ಯಾರ್ಥಿ ವೇತನದ ಬಗ್ಗೆ ಪ್ರಗತಿ ಪರಿಶೀಲನೆ ಮಾಡುವುದು.

**ಶಾಲಾ /ಪದವಿ ಪೂರ್ವ ಹಂತ :**

- ಶಿಕ್ಷಕರು / ಉಪನ್ಯಾಸಕರುಗಳಿಗೆ ತರಗತಿಗಳಲ್ಲಿ NMMS ವಿದ್ಯಾರ್ಥಿ ವೇತನದ ಬಗ್ಗೆ ಮಾಹಿತಿ ನೀಡಲು ತಿಳಿಸುವುದು.
- ಅರ್ಜಿ ಸಲ್ಲಿಸುವ ಪೂರ್ವದಲ್ಲಿ **Guidelines for Registration on National Scholarship Portal** ಅನ್ನು ಪೂರ್ಣವಾಗಿ ಓದಿ, ವಿದ್ಯಾರ್ಥಿಗಳಿಗೆ ಮಾಹಿತಿ ನೀಡಲು ಮುಖ್ಯ ಶಿಕ್ಷಕರು ಕ್ರಮವಹಿಸುವುದು.
- ಶಾಲಾ / ಕಾಲೇಜು NOTICE BOARD ನಲ್ಲಿ ಈ ಕುರಿತು ಪ್ರಕಟಿಸುವುದು.
- **www.scholarship.gov.in ವೆಬ್ ಸೈಟ್ ನ NSP ಯಲ್ಲಿ Institute Login ನಲ್ಲಿ USER ID ಮತ್ತು PASSWORD ಅನ್ನು ಬಳಸಿ Login ಆದ ನಂತರ School Profile ಅಪ್ ಡೇಟ್ ಮಾಡಿಕೊಳ್ಳುವುದು.**
- ಶಾಲಾ / ಕಾಲೇಜು ಮುಖ್ಯಸ್ಥರು ಅರ್ಹ ವಿದ್ಯಾರ್ಥಿಗಳ ಪೋಷಕರ ಸಭೆ ಕರೆದು ಅರ್ಜಿ ಸಲ್ಲಿಸಲು ತಿಳಿಸುವುದು.
- ವಿದ್ಯಾರ್ಥಿಗಳು Submit ಮಾಡಿರುವ ಅರ್ಜಿಯ ಧೃಡೀಕೃತ ಪ್ರತಿಯನ್ನು ಪಡೆದು, ಶಾಲೆಯಲ್ಲಿ ಪ್ರತ್ಯೇಕ ಕಡತ ನಿರ್ವಹಿಸುವುದು.

- ವಿದ್ಯಾರ್ಥಿ ವೇತನಕ್ಕೆ ಅರ್ಹರಾದ ವಿದ್ಯಾರ್ಥಿಗಳ ಆಧಾರ್ ಕಾರ್ಡ್, ಜಾತಿ ಪ್ರಮಾಣ ಪತ್ರ, ನವೀಕೃತ ಆದಾಯ ಪ್ರಮಾಣ ಪತ್ರ, ಆಧಾರ್ ಗೆ ಜೋಡಣೆಯಾಗಿರುವ ಬ್ಯಾಂಕ್ ಖಾತೆ ಪಾಸ್ ಬುಕ್ ಮುಂತಾದವುಗಳ ದೃಢೀಕೃತ ಪ್ರತಿಗಳನ್ನು ಸಂಗ್ರಹಿಸಿಟ್ಟುಕೊಳ್ಳುವುದು.
- ವಿದ್ಯಾರ್ಥಿಗಳು NSP ನಲ್ಲಿ ಸಲ್ಲಿಸಿರುವ ಅರ್ಜಿಗಳನ್ನು NMMS ಮಾರ್ಗಸೂಚಿ ಅನುಸಾರವಾಗಿ, ನಿಗಧಿತ ಅವಧಿಯೊಳಗಾಗಿ Verify ಮಾಡುವುದು.
- ಶಾಲೆಯ ಎಲ್ಲಾ ಅರ್ಹ ವಿದ್ಯಾರ್ಥಿಗಳು, ನಿಗಧಿತ ಅವಧಿಯೊಳಗಡೆ ಅರ್ಜಿ ಸಲ್ಲಿಸಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳುವುದು.
- ವಿದ್ಯಾರ್ಥಿಗಳು, ಪೋಷಕರು ಹಾಗೂ ಶಾಲಾ / ಕಾಲೇಜು ಮುಖ್ಯಸ್ಥರು ಈ ಸಂಬಂಧ ಹೆಚ್ಚಿನ ಮಾಹಿತಿಗಾಗಿ ಆಯಾ ಜಿಲ್ಲಾ NMMS ನೋಡಲ್ ಅಧಿಕಾರಿಗಳನ್ನು ಸಂಪರ್ಕಿಸುವುದು.

**ವಿ. ಸೂ : ಶೈಕ್ಷಣಿಕ ಜಿಲ್ಲೆಗಳಾದ ಚಿಕ್ಕೋಡಿ, ಬೆಂಗಳೂರು ಉತ್ತರ, ಮಧುಗಿರಿ ಹಾಗೂ ಶಿರಸಿ ಜಿಲ್ಲೆಯವರು ಕಡ್ಡಾಯವಾಗಿ ಕಂದಾಯ ಜಿಲ್ಲೆಗಳಾದ ಬೆಳಗಾವಿ, ಬೆಂಗಳೂರು ದಕ್ಷಿಣ, ತುಮಕೂರು ಹಾಗೂ ಉತ್ತರ ಕನ್ನಡ ಜಿಲ್ಲೆಯ ನೋಡಲ್ ಅಧಿಕಾರಿಗಳ ಸಮನ್ವಯದೊಂದಿಗೆ ವಿದ್ಯಾರ್ಥಿಗಳ ಅರ್ಜಿಗಳನ್ನು NSP ನಲ್ಲಿ Verification ಕಾರ್ಯವನ್ನು ಮಾಡುವುದು.**

**ಜಿಲ್ಲಾ ನೋಡಲ್ ಅಧಿಕಾರಿಗಳು, ಈ ಸಂಬಂಧ ಹೆಚ್ಚಿನ ಮಾಹಿತಿಗಾಗಿ ಕೆಳಕಂಡವರನ್ನು ಸಂಪರ್ಕಿಸುವುದು.**

- DSERT – ntsenmms.dsertkar@gmail.com
- UDISE - Sri Abhishek Kundu, Scientist-C, NIC Unit.
  e-mail: abhishek.kundu@nic.in, Mob : 9612780650.
- NSP – Sri. Raghavendra Khare consultant NMMSS,
  e-mail: ss.edu.nmmss@gmail.com Mob : 9555206785.
- Priya Gopal, NIC e-mail : priya.gopal@nic.in
- Help desk, NIC Ph No : 0120-6619540, email – helpdesk@gov.in
- www.scholarships.gov.in ವೆಬ್ ಸೈಟ್ services options ನಲ್ಲಿ ಲಭ್ಯವಿರುವ **user manual**, **Institute operation manual, FAQ's** ಹಾಗೂ ಇತರೆ ಮಾಹಿತಿಗಳನ್ನು download ಮಾಡಿಕೊಳ್ಳಬಹುದಾಗಿದೆ.

ಸುತ್ತೋಲೆಯ ಮೇಲಿನ ಎಲ್ಲಾ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ಡಯಟ್ ಪ್ರಾಂಶುಪಾಲರು ಹಾಗೂ ಉಪನಿರ್ದೇಶಕರು (ಆಡಳಿತ)ರವರು, ತಮ್ಮ ವ್ಯಾಪ್ತಿಯ ಶಾಲಾ ಮುಖ್ಯೋಪಾಧ್ಯಾಯರಿಗೆ ಹಾಗೂ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲರುಗಳಿಗೆ ಉಪನಿರ್ದೇಶಕರು ಪದವಿ ಪೂರ್ವ ಶಿಕ್ಷಣ ಇಲಾಖೆ ಇವರ ಮುಖಾಂತರ

ಮಾಹಿತಿ ನೀಡಿ ಅರ್ಹ ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನಕ್ಕಾಗಿ National Scholarship Portal ಮೂಲಕ ಅರ್ಜಿ ಸಲ್ಲಿಸಲು ಸೂಕ್ತ ಕ್ರಮವಹಿಸಿ, ಎಲ್ಲಾ ಅರ್ಹ ಫಲಾನುಭವಿಗಳು ವಿದ್ಯಾರ್ಥಿವೇತನವನ್ನು ಪಡೆಯಲು ಕ್ರಮವಹಿಸುವಂತೆ ಸೂಚಿಸಲಾಗಿದೆ.

(ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ.)

ನಿರ್ದೇಶಕರು, 15/7/24

ಡಿ.ಎಸ್. ಇ.ಆರ್.ಟಿ, ಬೆಂಗಳೂರು.

ಗೆ,

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಅಭಿವೃದ್ಧಿ) ಹಾಗೂ ಉಪನಿರ್ದೇಶಕರು (ಆಡಳಿತ) ಇವರಿಗೆ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಉಪನಿರ್ದೇಶಕರು (ಅಭಿವೃದ್ಧಿ) ಹಾಗೂ ಉಪನಿರ್ದೇಶಕರು (ಆಡಳಿತ) ಇವರ ಮೂಲಕ ಅಗತ್ಯ ಕ್ರಮಕ್ಕಾಗಿ.
3. ರಾಜ್ಯದ ಸರ್ಕಾರಿ ಹಾಗೂ ಅನುದಾನಿತ ಶಾಲೆಗಳ ಮುಖ್ಯೋಪಾಧ್ಯಾಯರಿಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ ಅಗತ್ಯ ಕ್ರಮಕ್ಕಾಗಿ.
4. ಕಛೇರಿ ಪ್ರತಿ.

**ಪ್ರತಿಯನ್ನು ಗೌರವ ಪೂರ್ವಕವಾಗಿ,**

1. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ರವರಿಗೆ ಅವಗಾಹನೆಗಾಗಿ ಸಲ್ಲಿಸಿದೆ.
2. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, ಬೆಂಗಳೂರು ರವರಿಗೆ ಅನುಪಾಲನೆಗಾಗಿ.
3. ಅಪರ ಆಯುಕ್ತರು, ಧಾರವಾಡ ಹಾಗೂ ಕಲಬುರ್ಗಿ ಆಯುಕ್ತಾಲಯ, ಶಾಲಾ ಶಿಕ್ಷಣ ಇಲಾಖೆ. ಇವರಿಗೆ ಅನುಪಾಲನೆಗಾಗಿ.